1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರಃ1702/2018

ಚಾಸಾಃ 2 ಪ್ರಾಸಾಃ2

ದಿನಾಂಕಃ 30.01.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪುಂಡಲೀಕ ಶೆಟ್ಟಿಗಾರ |
| ತಂದೆಯ ಹೆಸರು | : | ಮಹಾಬಲ ಶೆಟ್ಟಿಗಾರ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಕೃಷಿ |
| ವಾಸ ಸ್ಥಳ | : | ಹೆಸ್ಕತ್ತೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ಆರೋಪಿಯ ಪರಿಚಯವಿಲ್ಲ.

ಸಾಕ್ಷಿಗೆ ನಿಪಿ-3ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು 6-7 ವರ್ಷಗಳ ಹಿಂದೆ ಪೊಲೀಸರು ನಮ್ಮ ಊರಿಗೆ ಬೀಟ್ ಗಾಗಿ ಬಂದಾಗ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಆಗ ನನ್ನೊಂದಿಗೆ ಚಾಸಾ-3 ರವರು ಇದ್ದರು. ಆಗ ಸಂಜೆ ಸುಮಾರು 5 ಗಂಟೆಯಾಗಿತ್ತು. ನನ್ನ ಸಮಕ್ಷಮ ಯಾವುದೇ ಸ್ವತ್ತನ್ನು ವಶಕ್ಕೆ ಪಡೆದಿಲ್ಲ. ಪೊಲೀಸರು ನನ್ನನ್ನು ವಿಚಾರಿಸಿ ಯಾವುದೇ ಹೇಳಿಕೆ ಪಡೆದಿಲ್ಲ. ನಿಪಿ-10 ಮತ್ತು 11 ರಲ್ಲಿ ವಾಹನಗಳನ್ನು ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ದಿಃ 24-11-2017 ರಂದು ಸಂಜೆ 4-30ರ ವೇಳೆಗೆ ಚಾಸಾ-1 ರವರು ಹೆಸ್ಕತ್ತೂರು ಗ್ರಾಮದ ಹೆಸ್ಕತ್ತೂರು ಜಂಕ್ಷನ್ ನ ಬಳಿ ಇದ್ದ ನನ್ನ ಮತ್ತು ಚಾಸಾ-3 ರವರನ್ನು ಅಕ್ರಮ

ಮರುಳುಗಾರಿಕೆ ವೇಳೆಗೆ ದಾಳಿ ಮಾಡುವ ಸಮಯದಲ್ಲಿ ಸಹಕರಿಸುವಂತೆ ಕೋರಿ, ನೋಟೀಸನ್ನು ನೀಡಿ ಸಹಿ ಪಡೆದು ನಂತರ ಸಂಜೆ 5 ಗಂಟೆಗೆ ಹೆಸ್ಕತ್ತೂರು ಗ್ರಾಮದ ಹರಿಯಾಡಿಗೆ ತಲುಪಿ ಅಲ್ಲಿ ಒಂದು ಟಿಪ್ಪರ್ ವಾಹನ ದಬ್ಬೆ ಕಟ್ಟೆಗೆ ಚಲಿಸುತ್ತಿದ್ದು ಅದನ್ನು ತಡೆದು ನಿಲ್ಲಿಸಿದಾಗ ಅದರ ಚಾಲಕ ನಮ್ಮನ್ನು ನೋಡಿ ವಾಹನವನ್ನು ಅಲ್ಲೇ ಬಿಟ್ಟು ಓಡಿ ಹೋಗಿರುತ್ತಾನೆ ಎಂದರೆ ಸರಿಯಲ್ಲ.

ವಾಹನವನ್ನು ನಮ್ಮ ಸಮಕ್ಷಮ ಪರಿಶೀಲಿಸಿದಾಗ ಕೆಎ-20-ಸಿ-812 ಎಂಬ ನಂಬರಿನ ಬಿಳಿ ನೀಲಿ ಬಣ್ಣದ ಟಿಪ್ಪರ್ ಆಗಿರುತ್ತದೆ ಎಂದರೆ ಸರಿಯಲ್ಲ. ಅದರ ಹಿಂಬದಿಯನ್ನು ಪರಿಶೀಲಿಸಿ ನೋಡಿದಾಗ ಹಿಂಬದಿ ಬಾಡಿಯಲ್ಲಿ ಮರಳು ತುಂಬಿದ ಪ್ಲಾಸ್ಟಿಕ್ ಚೀಲ ಗಳು ಇರುವುದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಸದ್ರಿ ಮರಳನ್ನು ಎಲ್ಲಿಯೋ ಅಕ್ರಮವಾಗಿ ಕಳುವು ಮಾಡಿ ತುಂಬಿಕೊಂಡು ಸಾಗಾಟ ಮಾಡುತ್ತಿರುವುದನ್ನು ಖಚಿತಪಡಿಸಿಕೊಂಡು ನಮ್ಮ ಸಮಕ್ಷಮ ಸಂಜೆ 5-10 ರಿಂದ 6-15ರವರೆಗೂ ಪಂಚನಾಮೆ ಮೂಲಕ ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ನಾನು ದಾಳಿಗೆ ಸಹಕರಿಸಿ ಘಟನೆಯ ಪ್ರತ್ಯಕ್ಷದರ್ಶಿಯಾಗಿದ್ದು ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದ್ದರೂ ಆರೋಪಿ ಸದ್ರಿ ಕೃತ್ಯ ಎಸಗಿರುವ ವ್ಯಕ್ತಿ ಎಂದು ತಿಳಿದಿದ್ದರೂ ಆತ ನನ್ನ ಗ್ರಾಮಸ್ಥನಾಗಿದ್ದು ಅನಂತರ ಪೊಲೀಸುರ ನನಗೆ ತೋರಿಸಿ ನನ್ನ ಹೇಳಿಕೆ ಪಡೆದಿದ್ದರೂ ಈ ಬಗ್ಗೆ ಪೊಲೀಸರಿಗೆ ಹೇಳಿಕೆ ನೀಡಿದ್ದರೂ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಾನು ಮತ್ತು ಆರೋಪಿ ಒಂದೇ ಗ್ರಾಮದವರು ಎಂದರೆ ಸರಿ. ಆದ್ದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**